# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.02.2025 07.35 a.m.**

****************

ಮುಖ್ಯಾಂಶಗಳು

೧. ಇಂದಿನಿಂದ ಮೂರು ರಾಜ್ಯಗಳಿಗೆ ಐದು ದಿನಗಳ ಪ್ರವಾಸ ಕೈಗೊಳ್ಳಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಅಸ್ಸಾಂನಲ್ಲಿಂದು ಹೂಡಿಕೆದಾರರ ಮತ್ತು ಮೂಲಸೌಕರ್ಯ ಸಮಗ್ರ ಶೃಂಗಸಭೆ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ

೩. ನವೀಕರಿಸಬಹುದಾದ ಇಂಧನ ವಲಯದಲ್ಲಿ ನಿಗದಿತ ಗುರಿ ಸಾಧನೆಗೆ ಆರ್ಥಿಕ ಸಂಪನ್ಮೂಲ ಕ್ರೋಡೀಕರಣ ಅಗತ್ಯ - ಸಚಿವ ಪ್ರಲ್ಹಾದ್ ಜೋಶಿ

೪. ಮಹಿಳಾ ಐಪಿಎಲ್; ಆರ್‌ಸಿಬಿ- ಯುಪಿ ವಾರಿಯರ್ಸ್ ಪಂದ್ಯ ರೋಚಕ ಟೈನಲ್ಲಿ ಅಂತ್ಯ; ಸೂಪರ್ ಓವರ್‌ನಲ್ಲಿ ಯುಪಿಗೆ ಗೆಲುವು

****************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಮೂರು ರಾಜ್ಯಗಳಿಗೆ ಐದು ದಿನಗಳ ಪ್ರವಾಸ ಕೈಗೊಳ್ಳಿದ್ದಾರೆ. ಮಾರ್ಚ್ ೧ ರಂದು ಕೊನೆಗೊಳ್ಳುವ ತಮ್ಮ ಭೇಟಿಯ ಸಮಯದಲ್ಲಿ ರಾಷ್ಟ್ರಪತಿಗಳು ಬಿಹಾರ, ಮಧ್ಯಪ್ರದೇಶ ಮತ್ತು ಗುಜರಾತ್‌ನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಬಿಹಾರದ ಪಾಟ್ನಾ ವೈದ್ಯಕೀಯ ಕಾಲೇಜಿನ ಶತಮಾನೋತ್ಸವ ಸಮಾರಂಭದಲ್ಲಿಂದು ಭಾಗಿಯಾಗಲಿದ್ದಾರೆ. ನಾಳೆ, ರಾಷ್ಟ್ರಪತಿ ಅವರು ಮಧ್ಯಪ್ರದೇಶದ ಛತ್ತರ್‌ಪುರದ ಗಢಾದಲ್ಲಿ ಬಾಗೇಶ್ವರ ಜನ ಸೇವಾ ಸಮಿತಿ ಆಯೋಜಿಸಿರುವ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಪಾಲ್ಗೊಂಡು, ಏಕತಾ ಪ್ರತಿಮೆಗೆ ಗೌರವ ಸಲ್ಲಿಸಲಿದ್ದಾರೆ ಮತ್ತು ಗುಜರಾತ್‌ನ ಕೆವಾಡಿಯಾದಲ್ಲಿ ನರ್ಮದಾ ಆರತಿಯನ್ನು ವೀಕ್ಷಿಸಲಿದ್ದಾರೆ.

ನಾಡಿದ್ದು, ರಾಷ್ಟ್ರಪತಿಗಳು ಕೆವಾಡಿಯಾದಲ್ಲಿರುವ ಏಕತಾ ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ ಭೇಟಿ ನೀಡಲಿದ್ದು, ಅಹಮದಾಬಾದ್‌ನಲ್ಲಿರುವ ರಾಷ್ಟ್ರೀಯ ವಿನ್ಯಾಸ ಸಂಸ್ಥೆಯ ೪೪ ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಶುಕ್ರವಾರ, ಅವರು ಗಾಂಧಿನಗರದಲ್ಲಿರುವ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದ ೩ ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

ಬಳಿಕ ಭುಜ್‌ನಲ್ಲಿರುವ ಸ್ಮೃತಿವನ್ ಭೂಕಂಪ ಸ್ಮಾರಕಕ್ಕೆ ಭೇಟಿ ನೀಡಲಿದ್ದಾರೆ. ಶನಿವಾರ, ರಾಷ್ಟ್ರಪತಿಗಳು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಧೋಲವಿರ ವೀಕ್ಷಿಸಲಿದ್ದಾರೆ.

****************

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಿಗ್ಗೆ ಗುವಾಹಟಿಯಲ್ಲಿ ನಡೆಯಲಿರುವ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಸಮಗ್ರ ಶೃಂಗಸಭೆಯಯನ್ನು ಉದ್ಘಾಟಿಸಲಿದ್ದಾರೆ.

ಎರಡು ದಿನಗಳ ಈ ಶೃಂಗಸಭೆಯಲ್ಲಿ ೧೪ ವಿಷಯಾಧಾರಿತ ಅಧಿವೇಶನಗಳು ನಡೆಯುಲಿವೆ. ಇದರಲ್ಲಿ ಕೈಗಾರಿಕಾ ವಿಕಸನ, ಜಾಗತಿಕ ವ್ಯಾಪಾರ ಪಾಲುದಾರಿಕೆಗಳು ಮತ್ತು ಅಸ್ಸಾಂನ ಉಜ್ವಲ ಎಂಎಸ್ಎಂಇ ವಲಯದ ಮೇಲೆ ಗಮನ ಕೇಂದ್ರೀಕರಿಸಲಾಗಿದೆ. ೨೪೦ ಕ್ಕೂ ಹೆಚ್ಚು ಪ್ರದರ್ಶಕರು ಭಾಗವಹಿಸಲಿದ್ದಾರೆ.

ಪ್ರಧಾನಿ ಅವರು ಬೆಳಿಗ್ಗೆ ೧೦:೩೦ಕ್ಕೆ ಹಲವಾರು ಗಣ್ಯರು, ರಾಜತಾಂತ್ರಿಕರು ಮತ್ತು ಕೈಗಾರಿಕೋದ್ಯಮಿಗಳ ಸಮ್ಮುಖದಲ್ಲಿ ಶೃಂಗಸಭೆಯ ಸಮಗ್ರ ಅಧಿವೇಶನವನ್ನು ಉದ್ಘಾಟಿಸಲಿದ್ದಾರೆ.

ಅಸ್ಸಾಂ ರಾಜ್ಯಪಾಲ ಎಲ್.ಪಿ. ಆಚಾರ್ಯ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಕೇಂದ್ರ ಸಚಿವರಾದ ಸರ್ಬಾನಂದ ಸೋನೋವಾಲ್, ಜ್ಯೋತಿರಾಧಿತ್ಯ ಸಿಂಧ್ಯಾ, ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು, ೬೧ ರಾಜತಾಂತ್ರಿಕರು, ಹಲವಾರು ದೇಶಗಳ ವ್ಯಾಪಾರ ನಿಯೋಗಗಳು, ಉದ್ಯಮ ತಜ್ಞರು ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವೆ ಅಶ್ವಿನಿ ವೈಷ್ಣವ್ ಇಂದು ಅಡ್ವಾಂಟೇಜ್ ಅಸ್ಸಾಂ ೨.೦ ಶೃಂಗಸಭೆಯ ಮಧ್ಯಾಹ್ನದ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಗುವಾಹಟಜಿಯಲ್ಲಿ ನಿನ್ನೆ ಅಸ್ಸಾಂ ಅಭಿವೃದ್ಧಿ ಕುರಿತು ಮಾತನಾಡಿ ಅಸ್ಸಾಂ ರಾಜ್ಯದ ಶ್ರೇಯೋಭಿವೃದ್ಧಿಗೆ ಬದ್ಧ ಎಂದು ಒತ್ತಿ ಹೇಳಿದರು.

ಧ್ವನಿ: ಪಿಎಂ

****************

ಬರುವ ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ನವೀಕರಿಸಬಹುದಾದ ಇಂಧನ ಉತ್ಪಾದನೆಯನ್ನು ಸಾಧಿಸಲು ಹಣಕಾಸು ಕ್ರೋಢೀಕರಣವು ಪ್ರಮುಖವಾಗಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯವು ಮುಂಬೈನಲ್ಲಿ ನಿನ್ನೆ ಆಯೋಜಿಸಿದ್ದ ನವೀಕರಿಸಬಹುದಾದ ಇಂಧನಕ್ಕಾಗಿ ಹಣಕಾಸು ಕ್ರೋಢೀಕರಣ ಕುರಿತ ರಾಷ್ಟ್ರೀಯ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ನವೀಕರಿಸಬಹುದಾದ ಇಂಧನ ವಲಯಕ್ಕೆ

ಪ್ರವೇಶಿಸಬಹುದಾದ ಧನಸಹಾಯವನ್ನು ಖಚಿತಪಡಿಸಿಕೊಳ್ಳಲು ಹಣಕಾಸು ಸಂಸ್ಥೆಗಳು ಮತ್ತು ನೀತಿ ನಿರೂಪಕರು ಸಾಮೂಹಿಕ ಪ್ರಯತ್ನಗಳಲ್ಲಿ ತೊಡಗಿಕೊಳ್ಳಬೇಕು ಎಂದು ಜೋಶಿ ಕರೆ ನೀಡಿದರು.

ಕಾರ್ಯಾಗಾರದಲ್ಲಿ ಪಿಎಂ ಸೂರ್ಯ ಘರ್ ಮತ್ತು ಪಿಎಂ-ಕುಸುಮ್ ನಂತಹ ಪ್ರಮುಖ ಯೋಜನೆಗಳನ್ನು ತ್ವರಿತಗೊಳಿಸುವ ಬಗ್ಗೆ ಚರ್ಚೆಗಳು ನಡೆದವು ಎಂದು ಸಚಿವರು ಹೇಳಿದರು.

ಭಾರತದ ಇಂಧನ ಅಗತ್ಯಗಳ ಪ್ರಮಾಣವನ್ನು ಒತ್ತಿ ಹೇಳಿದ ಪ್ರಲ್ಹಾದ್ ಜೋಶಿ, ದೇಶವು ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಗುರಿಯನ್ನು ಹೊಂದಿರುವುದರಿಂದ, ಅದರ ಇಂಧನ ಬೇಡಿಕೆ ದ್ವಿಗುಣಗೊಳ್ಳುವ ನಿರೀಕ್ಷೆಯಿದೆ. ಉಷ್ಣ ವಿದ್ಯುತ್ ಉತ್ಪಾದನೆಗೆ ಸರಿಹೊಂದುವಂತೆ ನವೀಕರಿಸಬಹುದಾದ ಇಂಧನ ವಲಯದ ಮಾಪನ ಮಾಡುವ ಅಗತ್ಯವಿದೆ ಎಂದು ಹೇಳಿದರು.

****************

ವತನ್ ಕೋ ಜಾನೋ' ಯುವ ವಿನಿಮಯ ಕಾರ್ಯಕ್ರಮದಡಿ ಜಮ್ಮು ಮತ್ತು ಕಾಶ್ಮೀರದ ಯುವ ಸಮೂಹದೊಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಷಾ ದೆಹಲಿಯಲ್ಲಿ ನಿನ್ನೆ ಸಂವಾದ ನಡೆಸಿದರು.

ಕಳೆದ ಹತ್ತು ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಮೂಲಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ದೇಶವನ್ನು ವಿಶ್ವದಲ್ಲಿಯೇ ಪ್ರಥಮ ಸ್ಥಾನಕ್ಕೆ ತರಲು ಶ್ರಮಿಸುತ್ತಿದೆ. ಯುವ ಜನಾಂಗ ಉನ್ನತ ವಿದ್ಯಾಭ್ಯಾಸ ಅಥವಾ ಉದ್ಯೋಗಕ್ಕಾಗಿ ವಿದೇಶದತ್ತ ಮುಖ ಮಾಡುತ್ತಿದ್ದಾರೆ. ಆದರೆ ಮುಂದಿನ ಹತ್ತು ವರ್ಷಗಳಲ್ಲಿ ಇಡೀ ಪ್ರಪಂಚದ ಯುವಕರು, ಭಾರತದತ್ತ ಮುಖ ಮಾಡುವ ಕಾಲ ದೂರವಿಲ್ಲ ಎಂದರು.

ಜಮ್ಮು - ಕಾಶ್ಮೀರದ ಪ್ರತಿಯೊಬ್ಬ ಮಕ್ಕಳೂ ಶಿಕ್ಷಣ ಪಡೆಯಬೇಕು, ಅವರಿಗೂ ಉನ್ನತ ಶಿಕ್ಷಣ ದೊರೆಯಬೇಕು, ಮಾರಕಾಸ್ತ್ರಗಳ ಬದಲು ಅವರ ಕೈಯಲ್ಲಿ ಪುಸ್ತಕ ಇರಬೇಕು ಎನ್ನುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಹಲವು ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ.

ಎರಡು ಐಐಎಂ ಕಾಲೇಜುಗಳು ಇರುವ ಏಕೈಕ ರಾಜ್ಯ ಜಮ್ಮು-ಕಾಶ್ಮೀರ. ಇಲ್ಲಿ ೧೪ ಕಾಲೇಜು, ಎಂಟು ವಿಶ್ವವಿದ್ಯಾಲಯಗಳನ್ನು ಆರಂಭಿಸಲಾಗಿದ್ದು, ಇದರ ಪ್ರಯೋಜವನ್ನು ಮಕ್ಕಳು ಪಡೆದು ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂದರು.

****************

ಮಧ್ಯಪ್ರದೇಶದ ರಾಜಧಾನಿ ಭೋಪಾಲ್‌ನಲ್ಲಿ ಎರಡು ದಿನಗಳ ಜಾಗತಿಕ ಹೂಡಿಕೆದಾರರ ಶೃಂಗಸಭೆ ಇಂದು ಮುಕ್ತಾಯವಾಗಲಿದೆ.

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್

ಖಟ್ಟರ್ ಮತ್ತು ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಕೂಡ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

***************

ಮಾನವ ಹಕ್ಕುಗಳ ರಕ್ಷಣೆ ಮತ್ತು ಜಾಗತಿಕ ಪ್ರಚಾರದಲ್ಲಿ ಭಾರತ ಸಕ್ರಿಯ ಪಾತ್ರ ವಹಿಸುತ್ತಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ಜಿನೀವಾದಲ್ಲಿ ನಡೆದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯ ೫೮ ನೇ ಅಧಿವೇಶನವನ್ನು ವರ್ಚುವಲ್ ಆಗಿ ಉದ್ದೇಶಿಸಿ ಮಾತನಾಡಿದ ಅವರು, ಭಾರತದ ವಿಧಾನವು ತನ್ನ ಪಾಲುದಾರರ ಆದ್ಯತೆಗಳೊಂದಿಗೆ ಹೊಂದಾಣಿಕೆಯಲ್ಲಿ ಸಾಮರ್ಥ್ಯವನ್ನು ನಿರ್ಮಿಸುವುದು ಮತ್ತು ಮಾನವ ಸಂಪನ್ಮೂಲಗಳು ಮತ್ತು ಮೂಲಸೌಕರ್ಯವನ್ನು ಬಲಪಡಿಸುವುದರ ಮೇಲೆ ಕೇಂದ್ರೀಕೃತವಾಗಿದೆ ಎಂದು ಹೇಳಿದರು.

ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತ ದೃಢವಾಗಿದ್ದು, ಈ ವಿಚಾರದಲ್ಲಿ ಎಂದಿಗೂ ರಾಜಿಯಾಗುವುದಿಲ್ಲ. ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯನ್ನು ಭಾರತ ಯಾವಾಗಲೂ ಪ್ರತಿಪಾದಿಸುತ್ತದೆ ಮತ್ತು ಅದನ್ನು ಸಾಮಾನ್ಯೀಕರಿಸುವ ಯಾವುದೇ ಪ್ರಯತ್ನಕ್ಕೆ ಕರೆ ನೀಡುತ್ತದೆ ಎಂದು ಅವರು ತಿಳಿಸಿದರು.

***************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳ ನಾಳೆ ಶಿವರಾತ್ರಿಯ ದಿನದಂದು ಸಂಪನ್ನಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ದೇಶ-ವಿದೇಶಗಳಿಂದ ಲಕ್ಷಾಂತರ ಮಂದಿ ಪ್ರಯಾಗ್‌ರಾಜ್‌ಗೆ ಆಗಮಿಸುತ್ತಿದ್ದಾರೆ.

ನಿನ್ನೆ ಸಹ ಕೋಟ್ಯಂತರ ಶ್ರದ್ಧಾಳುಗಳು ಪುಣ್ಯಸ್ನಾನದಲ್ಲಿ ಭಾಗಿಯಾದರು. ಈಗಾಗಲೇ ೬೦ ಕೋಟಿಗೂ ಅಧಿಕ ಭಕ್ತರು ತ್ರಿವೇಣಿ ಸಂಗಮದಲ್ಲಿ ಮಿಂದಿದ್ದಾರೆ.

ಕುಂಭಮೇಳದಲ್ಲಿ ಭಾಗಿಯಾಗುವ ಭಕ್ತರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದ್ದು, ಎಲ್ಲೆಡೆ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಸುಮಾರು ೧೫ ಸಾವಿರಕ್ಕೂ ಅಧಿಕ ಕಾರ್ಮಿಕರು ನೈರ್ಮಲ್ಯ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ವಿಶ್ವದಾಖಲೆ ಸೃಷ್ಟಿಯಾಗಿದೆ.

ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿರುವ ಕುರಿತು ಪುಣ್ಯಸ್ನಾನದಲ್ಲಿ ಭಾಗಿಯಾದ ಯಾತ್ರಾರ್ಥಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

***************

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ೨೦೨೫ರ ಆರ್ಥಿಕ ಸಾಕ್ಷರತಾ ಸಪ್ತಾಹವನ್ನು ಪ್ರಾರಂಭಿಸಿದೆ. ಇದು ಜನರಲ್ಲಿ ಆರ್ಥಿಕ ಜಾಗೃತಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

ನಿನ್ನೆಯಿಂದ ಇದೇ ತಿಂಗಳ ೨೮ರವರೆಗೆ 'ಹಣಕಾಸು ಸಾಕ್ಷರತೆ-ಮಹಿಳೆಯರ ಸಮೃದ್ಧಿ' ಎಂಬ ಧ್ಯೇಯವಾಕ್ಯದಡಿ ಈ ಅಭಿಯಾನ ನಡೆಯುತ್ತಿದೆ.

ಅರುಣಾಚಲ ಪ್ರದೇಶದ ಇಟಾ ನಗರದಲ್ಲಿ ಆರ್‌ಬಿಐ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಅಭಿಷೇಕ್ ಮಜುಂದಾರ್ ಈ ಅಭಿಯಾನಕ್ಕೆ ಚಾಲನೆ ನೀಡಿದರು.

ಅಭಿಯಾನದ ಅಂಗವಾಗಿ ಬ್ಯಾಂಕ್‌ಗಳು ತಮ್ಮ ವೆಬ್‌ಸೈಟ್‌ಗಳು, ಎಟಿಎಂಗಳು, ಮೊಬೈಲ್ ಅಪ್ಲಿಕೇಷನ್‌ಗಳು ಹಾಗೂ ತಮ್ಮ ಶಾಖೆಗಳಲ್ಲಿ ಆರ್‌ಬಿಐ ಸಿದ್ಧಪಡಿಸಿದ ಪೋಸ್ಟರ್‌ಗಳನ್ನು ಪ್ರದರ್ಶಿಸುವ ಮೂಲಕ ಜಾಗೃತಿ ಮೂಡಿಸುತ್ತಿವೆ.

****************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಯುಪಿ ವಾರಿಯರ್ಸ್ ವಿರುದ್ಧ ಸೂಪರ್ ಓವರ್ ನಲ್ಲಿ ಗೆಲುವು ಸಾಧಿಸಿದೆ.

ಟಾಸ್ ಗೆದ್ದ ಯುಪಿ ವಾರಿಯರ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಬೆಂಗಳೂರು ತಂಡ ನಿಗದಿತ ೨೦ ಓವರ್ ಗಳಲ್ಲಿ ೬ ವಿಕೆಟ್ ಕಳೆದುಕೊಂಡು ೧೮೦ ರನ್ ಗಳಿಸಿತು.

ಯುಪಿ ವಾರಿಯರ್ಸ್ ಸಹ ನಿಗದಿತ ೨೦ ಓವರ್‌ಗಳಲ್ಲಿ ೧೮೦ ರನ್ ಗಳಿಸಿತ್ತು. ಪಂದ್ಯ ರೋಚಕ ಟೈ ಆದ ಕಾರಣ ಸೂಪರ್ ಓವರ್‌ನಲ್ಲಿ ಯುಪಿ ವಾರಿಯರ್ಸ್ ೪ ರನ್‌ಗಳ ಅಂತರದಲ್ಲಿ ಗೆಲುವು ಸಾಧಿಸಿತು. ಸೂಪರ್ ಓವರ್‌ನಲ್ಲಿ ಯಪಿ ತಂಡ ೮ ರನ್ ಗಳಿಸಿತು. ಬೆಂಗಳೂರು ತಂಡ ೪ ರನ್ ಮಾಡಿ ಪರಾಭವಗೊಂಡಿತು.

****************